**All India Radio: Bangalore**
**National Bulletin In Kannada**
**11.02.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.02.2025 07.35 a.m.**
********************

ಮುಖ್ಯಾಂಶಗಳು

೧. ಪ್ಯಾರಿಸ್ ತಲುಪಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅದ್ದೂರಿ ಸ್ವಾಗತ; ಫ್ರಾನ್ಸ್ ಅಧ್ಯಕ್ಷ ಇಮ್ಯಾನ್ಯೂಯಲ್ ಮ್ಯಾಕ್ರೇನ್ ಅವರೊಂದಿಗೆ ಇಂದು ಮಹತ್ವದ ಮಾತುಕತೆ

೨. ಎರಡು ದಿನಗಳ ಅಂತಾರಾಷ್ಟ್ರೀಯ ಯುನಾನಿ ಸಮ್ಮೇಳನಕ್ಕೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಚಾಲನೆ

೩. ಬೆಂಗಳೂರಿನಲ್ಲಿ ಇಂದಿನಿಂದ ಕರ್ನಾಟಕ ಇನ್ವೆಸ್ಟ್ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ; ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚಾಲನೆ

೪. ದೆಹಲಿ ಓಪನ್ ಟೆನಿಸ್ ಪಂದ್ಯಾವಳಿ; ಆರಂಭಿಕ ಸುತ್ತಿನಲ್ಲಿ ಭಾರತದ ಮುಕುಂದ್ ಶಶಿಕುಮಾರ್, ಫ್ರಾನ್ಸ್‌ನ ಸಾಚ್ಚಾ ಗೆಮಾರ್ಡ್ ವಯೇನ್‌ಬರ್ಗ್ ನಡುವೆ ಸೆಣಸು

****************

ಫ್ರಾನ್ಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಪ್ಯಾರಿಸ್‌ನಲ್ಲಿಂದು ಆ ದೇಶದ ಅಧ್ಯಕ ಇಮ್ಯಾನ್ಯೂಯಲ್ ಮ್ಯಾಕ್ರೇನ್ ಅವರೊಂದಿಗೆ ಉಭಯ ದೇಶಗಳ ನಡುವಿನ ಸಂಬಂಧವನ್ನು ಮತ್ತುಷ್ಟು ಮಹತ್ವದ ಮಾತುಕತೆ ನಡೆಸಲಿದ್ದಾರೆ.

ಇದೇ ವೇಳೆ ಅವರು, ಪ್ರಮುಖ ದ್ವಿಪಕ್ಷೀಯ ಸಂಬಂಧಗಳ ವೃದ್ಧಿ ಕುರಿತು ನಡೆಯಲಿರುವ ಚರ್ಚೆಗಳಲ್ಲಿ ಭಾಗವಹಿಸಲಿದ್ದಾರೆ. ಭಾರತ ಮತ್ತು ಫ್ರಾನ್ಸ್ ನಡುವೆ ಮಹತ್ವದ ದ್ವೀಪಕ್ಷೀಯ ಸಂಬಂಧಗಳ ವೃದ್ಧಿ ಕುರಿತ ಹಲವು ಒಪ್ಪಂದಗಳಿಗೆ ಸಹಿ ಮಾಡುವ ನಿರೀಕ್ಷೆ ಇದೆ.

ಕೃತಕ ಬುದ್ಧಿಮತ್ತೆ ಕ್ರಿಯಾಶೀಲತೆ ಕುರಿತ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಈ ಶೃಂಗಸಭೆಯಲ್ಲಿ ಸಹ ಅಧ್ಯಕ್ಷತೆವಹಿಸಲಿರುವ ಪ್ರಧಾನಿ ಮೋದಿ, ಕೃತಕ ಬುದ್ಧಿಮತ್ತೆ ಅಭಿವೃದ್ಧಿಯಲ್ಲಿ ಜಾಗತಿಕ ಗುಣಮಟ್ಟ ಕಾಯ್ದುಕೊಳ್ಳುವ ಸಂಬಂಧ ಚರ್ಚೆ ನಡೆಸಲಿದ್ದಾರೆ.

ಈ ನಡುವೆ, ಫ್ರಾನ್ಸ್‌ಗೆ ನಿನ್ನೆ ರಾತ್ರಿ ತಲುಪಿದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅದ್ದೂರಿ ಸ್ವಾಗತ ನೀಡಲಾಯಿತು. ವಿಮಾನ ನಿಲ್ದಾಣದಲ್ಲಿ ಇಳಿಯುತ್ತಿದ್ದಂತೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಫ್ರಾನ್ಸ್‌ನ ಸಶಸ್ತ್ರ ಪಡೆಗಳ ಖಾತೆ ಸಚಿವ ಸೆಬಾಸ್ಟೀಯನ್ ಲೆಕಾರ್ನೊ ಆತ್ಮೀಯವಾಗಿ ಬರಮಾಡಿಕೊಂಡರು. ಈ ಸಂದರ್ಭದಲ್ಲಿ ಪ್ರಧಾನಿ ಅವರಿಗೆ ಪ್ಯಾರಿಸ್‌ನಲ್ಲಿ ಭಾರತೀಯ ಸಮುದಾಯದಿಂದಲೂ ಆತ್ಮೀಯ ಸ್ವಾಗತ ದೊರೆಯಿತು.

ಮೋದಿ ಪರ ಜೈಕಾರ ಘೋಷಣೆ ಭಾರತದ ತ್ರಿವರ್ಣ ಧ್ವಜಗಳ ಹಾರಾಟ ಕಂಡು ಬಂತು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ, ಭಾರತೀಯ ಸಮುದಾಯದಿಂದ ದೊರೆತ ಸ್ವಾಗತಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ. ಬಳಿಕ ಪ್ರಧಾನಿ, ಫ್ರೆಂಚ್ ಅಧ್ಯಕ್ಷ ಇಮ್ಯಾನ್ಯುಯಲ್ ಮ್ಯಾಕ್ರೆನ್ ಅವರು ಎಐ ಶೃಂಗಸಭೆಯಲ್ಲಿ ಪಾಲ್ಗೊಳ್ಳುವ ನಾಯಕರಿಗಾಗಿ ಏರ್ಪಡಿಸಿದ್ದ ಔತಣಕೂಟದಲ್ಲಿ ಭಾಗಿಯಾಗಿದ್ದರು. ಇದೇ ಸಂದರ್ಭದಲ್ಲಿ ಪ್ರಧಾನಿ, ಅಮೆರಿಕಾದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರೊಂದಿಗೆ ಚರ್ಚೆ ನಡೆಸಿದರು.

ಫ್ರಾನ್ಸ್ ಪ್ರವಾಸ ಮುಗಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ, ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಹ್ವಾನದ ಮೇರೆಗೆ ಅಮೆರಿಕಾಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ.

*****************

ನವದೆಹಲಿಯಲ್ಲಿ ಯುನಾನಿ ದಿನವಾದ ಇಂದು  ರಾಷ್ಟ್ರಪತಿ ದ್ರೌಪದಿ ಮುರ್ಮು ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಸಹ ಭಾಗವಹಿಸಲಿದ್ದಾರೆ.

ಖ್ಯಾತ ಯುನಾನಿ ವೈದ್ಯ, ಶಿಕ್ಷಣ ತಜ್ಞ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಹಕೀಮ್ ಅಜ್ಮಲ್ ಖಾನ್ ಅವರ ಜನ್ಮ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ ೧೧ ಅನ್ನು ಯುನಾನಿ ದಿನವನ್ನಾಗಿ ಆಚರಿಸಲಾಗುತ್ತದೆ. ಯುನಾನಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಅವರು ನೀಡಿದ ಕೊಡುಗೆಗಳನ್ನು ಈ ದಿನ ಗುರುತಿಸುತ್ತದೆ.

ಕೇಂದ್ರೀಯ ಯುನಾನಿ ಔಷಧೀಯ ಸಂಶೋಧನಾ ಪರಿಷತ್ತು, ಆಯುಷ್ ಸಚಿವಾಲಯದಡಿಯಲ್ಲಿ 'ಸಮಗ್ರ ಆರೋಗ್ಯ ಪರಿಹಾರಗಳಿಗಾಗಿ ಯುನಾನಿ ಔಷಧದಲ್ಲಿ ಆವಿಷ್ಕಾರಗಳು-ಮುಂದಿನ ಹಾದಿ' ಎಂಬ ಧ್ಯೇಯದಲ್ಲಿ ಸಮ್ಮೇಳನವನ್ನು ಆಯೋಜಿಸುತ್ತಿದೆ.

ಜಾಗತಿಕ ಆರೋಗ್ಯ ಮತ್ತು ಯೋಗಕ್ಷೇಮದ ಪ್ರಚಾರದಲ್ಲಿ ಯುನಾನಿ ಔಷಧದ ಪ್ರಮುಖ ಪಾತ್ರವನ್ನು ಎತ್ತಿ ತೋರಿಸುವ ಉದ್ದೇಶದಿಂದ ಇದು ಸಂವಾದ, ಸಹಯೋಗ ಮತ್ತು ಜ್ಞಾನ ವಿನಿಮಯಕ್ಕೆ ವೇದಿಕೆಯಾಗಲಿದೆ.

*****************

ಬೆಂಗಳೂರು ಅರಮನೆ ಮೈದಾನದಲ್ಲಿ ಇಂದಿನಿಂದ ಇದೇ ೧೪ರವರೆಗೆ ಇನ್ವೆಸ್ಟ್ ಕರ್ನಾಟಕ ೨೦೨೫ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆಯಲಿದ್ದು, ಇಂದು ಸಂಜೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಮಾವೇಶಕ್ಕೆ ಚಾಲನೆ ನೀಡಲಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಹಾಗೂ ವಿ.ಸೋಮಣ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಉದ್ದಿಮೆ ನೀತಿ ನಿರೂಪಣೆ ಹಾಗೂ ನಾವೀನ್ಯತೆ ಕ್ಷೇತ್ರದ ದಿಗ್ಗಜರ ಸಮಾಗಮಕ್ಕೆ ಮತ್ತು ಚಿಂತನ-ಮಂಥನಕ್ಕೆ ಇದು ವೇದಿಕೆ ಒದಗಿಸಲಿದೆ ಎಂದು ರಾಜ್ಯದ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ನವೋದ್ಯಮ ಏರೋಸ್ಪೇಸ್ ಮತ್ತು ಡಿಫೆನ್ಸ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಶ್ವಾದಾದ್ಯಂತ ಪ್ರಖ್ಯಾತಿಯ ಚಾಪು ಮೂಡಿಸಿರುವ ಕರ್ನಾಟಕ, ಪ್ರಗತಿಯ ಮರುಕಲ್ಪನೆ ಧ್ಯೇಯದ ಈ ಸಮಾವೇಶದ ಮೂಲಕ ವಿಶ್ವದಾದ್ಯಂತ ಹೂಡಿಕೆದಾರರನ್ನು ರಾಜ್ಯದತ್ತ ಸೆಳೆಯಲು ಸಜ್ಜಾಗಿದೆ.

****************

ಏಷ್ಯಾದ ಅತಿದೊಡ್ಡ ವೈಮಾನಿಕ ಪ್ರದರ್ಶನದ ೧೫ನೇ ಆವೃತ್ತಿ - ಏರೋ ಇಂಡಿಯಾ ೨೦೨೫ಕ್ಕೆ ಇಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿನ್ನೆ ಚಾಲನೆ ನೀಡಿದರು. ಈ ಪ್ರದರ್ಶನ ಕರ್ನಾಟಕದ ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಇದೇ ೧೪ರ ವರೆಗೆ ನಡೆಯಲಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಭಾರತೀಯ ರಕ್ಷಣಾ ಪರಿಸರ ವ್ಯವಸ್ಥೆಯು ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಇದು ನೀಡುತ್ತಿರುವ ಅವಕಾಶಗಳನ್ನು ಬಳಸಿಕೊಳ್ಳುವಂತೆ ಮತ್ತು ಇಂದಿನ ಅಸ್ಥಿರ ಭೌಗೋಳಿಕ ರಾಜಕೀಯ ಸ್ಥಿತಿಯಿಂದಾಗಿ ಉಂಟಾಗುತ್ತಿರುವ ಸವಾಲುಗಳಿಗೆ ಉದ್ದೇಶಿತ ಪರಿಹಾರಗಳನ್ನು ಕಂಡುಕೊಳ್ಳುವಂತೆ ಜಾಗತಿಕ ಮೂಲ ಸಲಕರಣೆ ತಯಾರಕರಿಗೆ ಕರೆ ನೀಡಿದ್ದಾರೆ.

ಅಭಿವೃದ್ಧಿ ಹೊಂದುತ್ತಿರುವ ದೇಶ ಎಂದು ಕರೆಸಿಕೊಳ್ಳುತ್ತಿರುವ ಭಾರತವು, ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ದೇಶಕ್ಕೆ ಪರಿವರ್ತನೆಗೊಳ್ಳಲು ಅನುಕೂಲವಾಗುವಂತೆ ದೇಶೀಯ ರಕ್ಷಣಾ ಉದ್ಯಮವನ್ನು ರಾಷ್ಟ್ರೀಯ ಆರ್ಥಿಕತೆಯ ಪ್ರಮುಖ ಅಂಶವನ್ನಾಗಿ ಮಾಡಲು ಸರ್ಕಾರ ತೆಗೆದುಕೊಂಡ ವಿವಿಧ ಕ್ರಮಗಳನ್ನು ರಕ್ಷಣಾ ಸಚಿವರು ವಿವರಿಸಿದರು. "ಹೊಸ ರಕ್ಷಣಾ ಪರವಾನಗಿಯನ್ನು ಬಯಸುವ ಕಂಪೆನಿಗಳಿಗೆ ಸ್ವಯಂಚಾಲಿತ ಮಾರ್ಗದ ಮೂಲಕ ಶೇ. ೭೪ ವರೆಗೆ ಎಫ್‌ಡಿಐ ಅನ್ನು ಅನುಮತಿಸಲಾಗಿದೆ ಎಂದರು.

ಇಲ್ಲಿಯವರೆಗೆ ರಕ್ಷಣಾ ವಲಯದಲ್ಲಿ ಒಟ್ಟು ೪೬ ಜಂಟಿ ಉದ್ಯಮಗಳು ಮತ್ತು ಕಂಪೆನಿಗಳಿಗೆ ವಿದೇಶಿ ಹೂಡಿಕೆಗೆ ಅನುಮೋದನೆ ನೀಡಲಾಗಿದೆ". ಜಾಗತಿಕವಾಗಿ ಭಾರತ ಮೂರನೇ ಅತಿ ದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆ ಹೊಂದಿದೆ. ಇದರಲ್ಲಿ ವರ್ಷದಿಂದ ವರ್ಷಕ್ಕೆ ೧೦ ರಿಂದ ೧೨ ಪ್ರತಿಶತದಷ್ಟು ಪ್ರಗತಿ ಸಾಧಿಸುವ ನಿರೀಕ್ಷೆ ಇದೆ ಎಂದರು.

೧೯೯೬ ರಿಂದ ಬೆಂಗಳೂರಿನಲ್ಲಿ ಆಯೋಜಿಸಲಾದ ಯಶಸ್ವಿ ೧೪ ಆವೃತ್ತಿಗಳೊಂದಿಗೆ ಏರೋ ಇಂಡಿಯಾ ಒಂದು ಜಾಗತಿಕವಾಗಿ ಪ್ರಮುಖವಾದ ವೈಮಾನಿಕ ಪ್ರದರ್ಶನವಾಗಿ ತನ್ನದೇ ಆದ ಸ್ಥಾನ ಪಡೆದುಕೊಂಡಿದೆ. ಕಳೆದ ಆವೃತ್ತಿಯು, ಏಳು ಲಕ್ಷಕ್ಕೂ ಅಧಿಕ ಸಂದರ್ಶಕರು, ೯೮ ದೇಶಗಳ ಗಣ್ಯರು, ಹೂಡಿಕೆದಾರರು, ನವೋದ್ಯಮಿಗಳು ಹಾಗೂ ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಸೇರಿದಂತೆ ೮೦೯ ಪ್ರದರ್ಶಕರನ್ನು ಆಕರ್ಷಿಸುವ ಮೂಲಕ ಗಮನಾರ್ಹ ಮೈಲಿಗಲ್ಲು ಸಾಧಿಸಿತ್ತು. ೨೦೨೫ರ ಆವೃತ್ತಿಯು ಈ ಸಾಧನೆಗಳನ್ನು ಮೀರಿಸುವ ಗುರಿಯನ್ನು ಹೊಂದಿದ್ದು, ಪ್ರದರ್ಶನದ ವ್ಯಾಪ್ತಿ ಮತ್ತು ಭವ್ಯತೆ ಇನ್ನೂ ವಿಸ್ತರಿಸಿದೆ.

****************

ದೆಹಲಿಯಲ್ಲಿ ಇಂದಿನಿಂದ ಭಾರತ ಇಂಧನ ಸಪ್ತಾಹ ೨೦೨೫ ಆರಂಭವಾಗಲಿದ್ದು ಪ್ರಧಾನಿ ನರೇಂದ್ರ ಮೋದಿ ವರ್ಚುಯಲ್ ಮೂಲಕ ಸಪ್ತಾಹಕ್ಕೆ ಚಾಲನೆ ನೀಡಲಿದ್ದಾರೆ. ಕೇಂದ್ರ ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಖಾತೆ ಸಚಿವ ಹರ್ದೀಪ್ ಸಿಂಗ್ ಪುರಿ ಈ ವಿಷಯ ತಿಳಿಸಿದ್ದಾರೆ.

ಈ ಇಂಧನ ಸಪ್ತಾಹವು ಜಾಗತಿಕವಾಗಿ ೨ನೇ ಅತಿದೊಡ್ಡ ಕಾರ್ಯಕ್ರಮವಾಗಿದೆ. ಈ ಸಂದರ್ಭದಲ್ಲಿ ಹಲವಾರು ಪ್ರಮುಖ ಕಂಪನಿಗಳ ಮುಖ್ಯಸ್ಥರು ಭಾಗವಹಿಸಲಿದ್ದು ಹಲವು ಗೋಷ್ಠಿಗಳು ನಡೆಯಲಿವೆ. ಪ್ರಧಾನ ಮಂತ್ರಿ ಉಜ್ವಲಯೋಜನೆಯ ಯಶಸ್ಸು ಕುರಿತು ಪ್ರದರ್ಶನ ಏರ್ಪಡಿಸಲಾಗುವುದು ಎಂದು ಸಚಿವರು ಹೇಳಿದ್ದಾರೆ. ಕೆನಡ , ಜರ್ಮನಿ, ಜಪಾನ್ , ಅಮೇರಿಕಾ ಮತ್ತು ಇಂಗ್ಲೆಂಡ್ ಸೇರಿದಂತೆ ಹತ್ತು ರಾಷ್ಟ್ರಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ ಎಂದು ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

****************

ವೈಮಾನಿಕ ಕ್ಷೇತ್ರದ ರಕ್ಷಣಾ ಮಸೂದೆ ೨೦೨೫ ಅನ್ನು ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನ ನಾಯ್ಡು ರಾಜ್ಯಸಭೆಯಲ್ಲಿ ನಿನ್ನೆ ಮಂಡಿಸಿದರು.

ಈ ಮಸೂದೆಯು ದೇಶದಲ್ಲಿ ವಿಮಾನ ಹಣಕಾಸು ಮತ್ತು ಗುತ್ತಿಗೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಇದು ದೇಶೀಯ ಕಾನೂನುಗಳನ್ನು ಕೇಪ್‌ಟೌನ್ ಸಮ್ಮೇಳನ ಮತ್ತು ಏರ್‌ಕ್ರಾಫ್ಟ್ ಪ್ರೋಟೋಕಾಲ್‌ನೊಂದಿಗೆ ಜೋಡಿಸುವ ಗುರಿಯನ್ನು ಹೊಂದಿದೆ.

****************

ಉಡಾನ್ ಯೋಜನೆಯಿಂದ ಎಲ್ಲರಿಗೂ ವಿಮಾನ ಪ್ರಯಾಣ ಕೈಗೆಟಕುವಂತಾಗುತ್ತದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ದೇಶಾದ್ಯಂತ ಸಾಧ್ಯವಾದಷ್ಟು ವಿಮಾನ ನಿಲ್ದಾಣಗಳನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ.

****************

ದೆಹಲಿ ಲಾನ್ ಟೆನಿಸ್ ಅಸೋಸಿಯೇಷನ್ ಸಮುಚ್ಚಯದಲ್ಲಿ ಇಂದು ನಡೆಯಲಿರುವ ದೆಹಲಿ ಓಪನ್ ೨೦೨೫ ಟೆನಿಸ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ಆರಂಭಿಕ ಸುತ್ತಿನಲ್ಲಿ ಭಾರತದ ಮುಕುಂದ್ ಶಶಿಕುಮಾರ್, ಫ್ರಾನ್ಸ್‌ನ ಸಾಚ್ಹಾ ಗೆಮಾರ್ಡ್ ವಯೇನ್‌ಬರ್ಗ್ ಅವರನ್ನು ಎದುರಿಸಲಿದ್ದಾರೆ.

ಮತ್ತೊಂದು ಪಂದ್ಯದಲ್ಲಿ ಭಾರತದ ರಾಮ್‌ಕುಮಾರ್ ರಾಮನಾಥನ್, ಝೆಚಿಯಾನ ದಲಿಬೋರ್ ಸರ್‌ಸೀನಾ ಅವರ ವಿರುದ್ಧ ಸೆಣಸಲಿದ್ದಾರೆ.

ಏತನ್ಮಧ್ಯೆ, ಪುರುಷರ ಡಬಲ್ಸ್‌ನಲ್ಲಿ ಭಾರತದ ನಿಕಿ ಕಲಿಯಂಡಾ ಪೂಣಚ್ಚ, ಜಿಂಬಾಂಬೆಯ ಕರ್ಟ್ನಿ ಜಾನ್ ಲಾಕ್ ಜೊತೆಗೂಡಿ ಝೆಕ್‌ನ ಜೋಡಿ ಝೆಚಿಯಾನ ದಲಿಬೋರ್ ಸರ್‌ಸೀನಾ ಹಾಗೂ ಮರೇಕ್ ಗೇನ್ ಜೇಲ್ ಅವರ ವಿರುದ್ಧ ಮೊದಲ ಸುತ್ತಿನ ಪಂದ್ಯದಲ್ಲಿ ಸೆಣಸಲಿದ್ದಾರೆ.

ಮತ್ತೊಂದೆಡೆ ನಿನ್ನೆ ನಡೆದ ಪುರುಷರ ಸಿಂಗಲ್ಸ್ ಮೊದಲ ಸುತ್ತಿನ ಪಂದ್ಯದಲ್ಲಿ ಭಾರತದ ಕರಣ್ ಸಿಂಗ್ ಕಜಕಿಸ್ತಾನದ ಲನೇ ಶ್ರೇಣಿಯ ತಿಮೋಫಿ ಕಾಟೊ ಅವರನ್ನು ೬-೪, ೬-೦ ಸೆಟ್‌ಗಳಿಂದ ಸೋಲಿಸಿದ್ದಾರೆ.

*********ಮುಕ್ತಾಯ********